## 51. ರಾಜ್ಯಕ್ಕೆ ರೂ. 4314 ಕೋಟಿ  ಜಿ.ಎಸ್.ಟಿ ಪರಿಹಾರ ಬಿಡುಗಡೆ

ಸರಕು ಮತ್ತು  ಸೇವಾ ತೆರಿಗೆ (ಜಿ.ಎಸ್.ಟಿ) ಕಾಯ್ದೆಯನ್ವಯ ಆದಾಯ ನಷ್ಟ ಪರಿಹಾರವಾಗಿ ಕೇಂದ್ರ ಸರ್ಕಾರವು ರಾಜ್ಯಕ್ಕೆ ಮೂರು ತಿಂಗಳ ಬಾಕಿ ಮೊತ್ತ ರೂ.4314 ಕೋಟಿ ಅನುದಾನ ಬಿಡುಗಡೆ ಮಾಡಿದೆ. 2019 ನಿಂದ 2020ರ ಫೆಬ್ರವರಿ ತಿಂಗಳವರೆಗಿನ ಆದಾಯ ನಷ್ಟದ ಪರಿಹಾರವನ್ನು ನೀಡಿದೆ. 3 ತಿಂಗಳ ಅವಧಿಯಲ್ಲಿ ರಾಜ್ಯ ಎದುರಿಸಿದ ಆದಾಯ ನಷ್ಟದ ಪರಿಹಾರ ಒದಗಿಸಲಾಗಿದೆ ಎಂದು ಕೇಂದ್ರ ಹಣಕಾಸು ಇಲಾಖೆ ತಿಳಿಸಿದೆ. 2017ರ ಜೂನ್ 1 ರಂದು ಜಾರಿಯಾದ ಜಿಎಸ್‌ಟಿ ಕಾಯ್ದೆಯಂತೆ 5 ವರ್ಷಗಳ ಕಾಲ ಕೇಂದ್ರವು ರಾಜ್ಯಗಳಿಗೆ ಆದಾಯ ನಷ್ಟದ ಪರಿಹಾರವನ್ನು ನೀಡಲಿದೆ. ಲಾಕ್‌ಡೌನ್‌ನಿಂದಾಗಿ ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ರಾಜ್ಯಕ್ಕೆ ಇದು ನೆರವಾಗಲಿದೆ. ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾದ ಒಟ್ಟು ಪರಿಹಾರಕ್ಕಿಂತ ಕಡಿಮೆ ಇದ್ದರೆ ನಂತರ ಹಂತದಲ್ಲಿ ರಾಜ್ಯದ ಆದಾಯದ ಕಾರ್ಯಕ್ಷಮತೆಯ ಸುಧಾರಣೆಗೆ ಇದೇ ರೀತಿಯ ವಿಧಾನ ಅನುಸರಿಸಲಾಗುತ್ತದೆ ಎಂದು ಕೇಂದ್ರ ಹೇಳಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ರಾಜ್ಯದ ಗೃಹ ಸಚಿವರು ಆಗಿರುವ ಜಿಎಸ್‌ಟಿ ಸಮಿತಿ ಸದಸ್ಯ ಬಸವರಾಜ ಬೊಮ್ಮಾಯಿ, ಕಳೆದ ಫೆಬ್ರವರಿವರೆಗಿನ ಮೂರು ತಿಂಗಳ ಅವಧಿಯ ಜಿ.ಎಸ್.ಟಿ ಬಾಕಿ ಬಿಡುಗಡೆಯಾಗಿದೆ. ಈ ಸಂಬಂಧ ಮುಖ್ಯಮಂತ್ರಿ  ಬಿ.ಎಸ್. ಯಡಿಯೂರಪ್ಪ ಅವರು ಕೇಂದ್ರದ ಹಣಕಾಸು  ಸಚಿವೆ ನಿರ್ಮಲಾ ಸೀತಾರಾಮನ್ ಅವರ ಬಳಿ ಮನವಿ ಮಾಡಿದ್ದರು. ಮಾರ್ಚ್ ಮತ್ತು ಏಪ್ರಿಲ್ ತಿಂಗಳ ಜಿಎಸ್‌ಟಿ ಮೊತ್ತ ರೂ.1800 ಕೋಟಿ ಬರಬೇಕಾಗಿದೆ. ಅದು ಮುಂದಿನ ಜುಲೈ ತಿಂಗಳಲ್ಲಿ ಬರಬಹುದು ಎಂದು ತಿಳಿಸಿದ್ದಾರೆ.

ಆಧಾರ:ಕನ್ನಡ ಪ್ರಭ, ದಿನಾಂಕ:25.06.2020